Akashvani: Bangalore
National Bulletin in Kannada
05.12.2025 : 13.10hrs

**ಆಕಾಶವಾಣಿ, ಬೆಂಗಳೂರು**

**ರಾಷ್ಟ್ರೀಯ ವಾರ್ತೆಗಳು**

05.12.2025 : 13.10hrs

******

**ಮುಖ್ಯಾಂಶಗಳು:**

1. ನವದೆಹಲಿಯಲ್ಲಿ ಪ್ರಧಾನಿ ನರೇಂದ್ರ ಮೋದಿ, ರಷ್ಯಾ ಅಧ್ಯಕ್ಷ ವ್ಲಾಡಿಮಿರ್ ಪುಟಿನ್ ದ್ವಿಪಕ್ಷೀಯ ಮಾತುಕತೆ; ಸಹಕಾರ ಬಲವರ್ಧನೆಗೆ ಒತ್ತು
2. ದ್ವೈಮಾಸಿಕ ಹಣಕಾಸು ನೀತಿ ಪ್ರಕಟ: ರೆಪೊದರ ಶೇಕಡ ೫.೨೫ಕ್ಕೆ ಇಳಿಸಿದ ಆರ್‌ಬಿಐ
3. ಉಮ್ಮೀದ್ ಪೋರ್ಟಲ್‌ನಲ್ಲಿ ೧.೫೧ ಲಕ್ಷಕ್ಕೂ ಹೆಚ್ಚು ವಕ್ಫ್ ಆಸ್ತಿಗಳ ನೋಂದಣಿ- ಕೇಂದ್ರ ಸಚಿವ ಕಿರಣ್ ರಿಜಿಜು
4. ಎಫ್‌ಐಎಚ್ ಪುರುಷರ ಜೂನಿಯರ್ ಹಾಕಿ ವಿಶ್ವಕಪ್; ಕ್ವಾರ್ಟರ್ ಫೈನಲ್‌ನಲ್ಲಿಂದು ಭಾರತ - ಬೆಲ್ಜಿಯಂ ಮುಖಾಮುಖಿ

*******

ನವದೆಹಲಿಯಲ್ಲಿಂದು ಪ್ರಧಾನಿ ನರೇಂದ್ರ ಮೋದಿ ಮತ್ತು ರಷ್ಯಾ ಅಧ್ಯಕ್ಷ ವ್ಲಾಡಿಮಿರ್ ಪುಟಿನ್ ಸಭೆ ನಡೆಸಿದರು. ಉಭಯ ನಾಯಕರು ದ್ವಿಪಕ್ಷೀಯ ಸಂಬಂಧಗಳಲ್ಲಿನ ಪ್ರಗತಿಯನ್ನು ಪರಿಶೀಲಿಸಿ, ಪರಸ್ಪರ ಹಿತಾಸಕ್ತಿಯ ಪ್ರಾದೇಶಿಕ ಮತ್ತು ಜಾಗತಿಕ ವಿಷಯಗಳ ಕುರಿತು ಅಭಿಪ್ರಾಯಗಳನ್ನು ವಿನಿಮಯ ಮಾಡಿಕೊಂಡರು. ಇಂದು ಬೆಳಿಗ್ಗೆ ರಾಷ್ಟ್ರಪತಿ ಭವನದಲ್ಲಿ ರಷ್ಯಾದ ಅಧ್ಯಕ್ಷರಿಗೆ ಸಾಂಪ್ರದಾಯಿಕ ಸ್ವಾಗತ ಕೋರಲಾಯಿತು. ಬಳಿಕ ರಷ್ಯಾ ಅಧ್ಯಕ್ಷರು, ರಾಜ್‌ಘಾಟ್‌ನಲ್ಲಿ ಮಹಾತ್ಮ ಗಾಂಧಿಯವರ ಸಮಾಧಿಗೆ ಪುಷ್ಪ ನಮನ ಸಲ್ಲಿಸಿದರು. ಇಂದು ಸಂಜೆ, ರಾಷ್ಟ್ರಪತಿ ದ್ರೌಪದಿ ಮುರ್ಮು, ರಷ್ಯಾದ ಅಧ್ಯಕ್ಷರ ಗೌರವಾರ್ಥವಾಗಿ ಔತಣಕೂಟವನ್ನು ಆಯೋಜಿಸಲಿದ್ದಾರೆ. ಅಧ್ಯಕ್ಷ ಪುಟಿನ್ ಮಧ್ಯಾಹ್ನ ನಡೆಯಲಿರುವ ೨೩ ನೇ ಭಾರತ-ರಷ್ಯಾ ವಾರ್ಷಿಕ ಶೃಂಗಸಭೆಗಾಗಿ ಭಾರತ

ಭೇಟಿಗಾಗಿ ನಿನ್ನೆ ಸಂಜೆ ನವದೆಹಲಿಗೆ ಆಗಮಿಸಿದರು. ಈ ವೇಳೆ, ವಿಶೇಷವಾಗಿ ರಷ್ಯನ್ ಭಾಷೆಯಲ್ಲಿ ಮುದ್ರಿತ ಭಗವದ್ಗೀತೆಯನ್ನು ಪ್ರಧಾನಿ, ರಷ್ಯಾ ಅಧ್ಯಕ್ಷರಿಗೆ ಉಡುಗೊರೆಯಾಗಿ ನೀಡಿದರು.

*******

ಆರ್ಥಿಕ ಬೆಳವಣಿಗೆಯನ್ನು ಮತ್ತಷ್ಟು ಬಲಪಡಿಸುವ ಪ್ರಯತ್ನದ ಭಾಗವಾಗಿ ಭಾರತೀಯ ರಿಸರ್ವ್ ಬ್ಯಾಂಕ್-ಆರ್‌ಬಿಐ ಇಂದು ಬಡ್ಡಿದರವನ್ನು ೨೫ ಮೂಲಾಂಶಗಳನ್ನು ಕಡಿತಗೊಳಿಸಿ ಶೇಕಡಾ ೫.೨೫ ಕ್ಕೆ ಇಳಿಸಿದೆ. ಪ್ರಸಕ್ತ ಹಣಕಾಸು ವರ್ಷದ ಐದನೇ ದ್ವೈಮಾಸಿಕ ಹಣಕಾಸು ನೀತಿಯನ್ನು ಆರ್‌ಬಿಐ ಗವರ್ನರ್ ಸಂಜಯ್ ಮಲ್ಹೋತ್ರಾ ಪ್ರಕಟಿಸಿದ್ದಾರೆ. ಈ ಬೆಳವಣಿಗೆಯು ವಸತಿ, ವಾಹನ ಮತ್ತು ವಾಣಿಜ್ಯ ಸಾಲಗಳು ಸೇರಿದಂತೆ ವಿವಿಧ ಕ್ಷೇತ್ರಗಳಲ್ಲಿ ದರಗಳನ್ನು ಅಗ್ಗವಾಗಿಸುವ ನಿರೀಕ್ಷೆಯಿದೆ. ಭಾರತದ ಚಿಲ್ಲರೆ ಹಣದುಬ್ಬರವು ಅಕ್ಟೋಬರ್ ೨೦೨೫ ರಲ್ಲಿ ಐತಿಹಾಸಿಕ ಕನಿಷ್ಠ ಮಟ್ಟವಾದ ೦.೨೫ ಪ್ರತಿಶತಕ್ಕೆ ಇಳಿದಿದೆ, ಇದು ಗ್ರಾಹಕ ಬೆಲೆ ಸೂಚ್ಯಂಕ ಸಿಪಿಐ ಸರಣಿಯನ್ನು ಪರಿಚಯಿಸಿದ ನಂತರದ ಅತ್ಯಂತ ಕಡಿಮೆ ಮಟ್ಟವನ್ನು ಸೂಚಿಸುತ್ತದೆ. ಈ ನಡುವೆ, ಭಾರತೀಯ ಆರ್ಥಿಕತೆಯು ಎರಡನೇ ತ್ರೈಮಾಸಿಕದಲ್ಲಿ ನಿರೀಕ್ಷೆಗಿಂತ ಉತ್ತಮವಾದ ಅಂದರೆ, ಶೇಕಡಾ ೮.೨ ರ ಜಿಡಿಪಿ ಬೆಳವಣಿಗೆಯನ್ನು ದಾಖಲಿಸಿದೆ.  ಪ್ರಸಕ್ತ ಹಣಕಾಸು ವರ್ಷದ ನಿರೀಕ್ಷಿತ ಬೆಳವಣಿಗೆಯನ್ನು ಆರ್‌ಬಿಐ ಶೇಕಡಾ ೭.೩ ಕ್ಕೆ ಹೆಚ್ಚಿಸಿದೆ, ಇದು ಹಿಂದಿನ ಅಂದಾಜಿನ ಪ್ರಕಾರ ಶೇಕಡಾ ೬.೮ ಕ್ಕಿಂತ ಹೆಚ್ಚಾಗಿದೆ. ಹಣಕಾಸು ನೀತಿ ಸಮಿತಿಯ ಶಿಫಾರಸುಗಳ ಆಧಾರದ ಮೇಲೆ, ಆರ್‌ಬಿಐ ಫೆಬ್ರವರಿ ಮತ್ತು ಏಪ್ರಿಲ್‌ನಲ್ಲಿ ರೆಪೊ ದರವನ್ನು ತಲಾ ೨೫ ಮೂಲಾಂಶಗಳಷ್ಟು ಮತ್ತು ಜೂನ್‌ನಲ್ಲಿ ೫೦ ಮೂಲಾಂಶಗಳಷ್ಟು ಕಡಿಮೆ ಮಾಡಿತ್ತು.

*******

ಉಮ್ಮೀದ್ ಪೋರ್ಟಲ್‌ನಲ್ಲಿ ಇದುವರೆಗೆ ಒಂದು ಲಕ್ಷ ೫೧ ಸಾವಿರಕ್ಕೂ ಹೆಚ್ಚು ವಕ್ಫ್ ಆಸ್ತಿಗಳನ್ನು ನೋಂದಾಯಿಸಲಾಗಿದೆ ಎಂದು ಕೇಂದ್ರ ಅಲ್ಪಸಂಖ್ಯಾತ ವ್ಯವಹಾರಗಳ ಸಚಿವ ಕಿರಣ್ ರಿಜಿಜು ಹೇಳಿದ್ದಾರೆ. ವಕ್ಫ್ ಕಾನೂನನ್ನು ರೂಪಿಸಿದ ನಂತರ, ಸಚಿವಾಲಯವು ಉಮ್ಮೀದ್ ಪೋರ್ಟಲ್ ಅನ್ನು ಪ್ರಾರಂಭಿಸಿದೆ ಮತ್ತು ಎಲ್ಲಾ ವಕ್ಫ್ ಆಸ್ತಿಗಳನ್ನು ಪೋರ್ಟಲ್‌ನಲ್ಲಿ ನೋಂದಾಯಿಸಲು

ಸಂಬಂಧಪಟ್ಟವರಿಗೆ ಆರು ತಿಂಗಳ ಕಾಲಾವಕಾಶ ನೀಡಲಾಗಿದೆ ಎಂದು ಅವರು ಹೇಳಿದರು. ನವದೆಹಲಿಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಈ ನೋಂದಣಿಗೆ ಇಂದು ಕೊನೆಯ ದಿನವಾಗಿದೆ. ಲಕ್ಷಾಂತರ ಆಸ್ತಿಗಳನ್ನು ಇನ್ನೂ ನೋಂದಾಯಿಸಲಾಗಿಲ್ಲ. ಮುಂದಿನ ಮೂರು ತಿಂಗಳವರೆಗೆ, ಉಮ್ಮೀದ್ ಪೋರ್ಟಲ್‌ನಲ್ಲಿ ನೋಂದಾಯಿಸುವವರ ಮೇಲೆ ಸಚಿವಾಲಯ ಯಾವುದೇ ದಂಡ ವಿಧಿಸುವುದಿಲ್ಲ ಅಥವಾ ಯಾವುದೇ ಕಠಿಣ ಕ್ರಮ ಕೈಗೊಳ್ಳುವುದಿಲ್ಲ ಎಂದು ಸಚಿವರು ಭರವಸೆ ನೀಡಿದರು.

*******

ತಮಿಳುನಾಡಿನ ಮಧುರೈನಲ್ಲಿರುವ ತಿರುಪರಾನು ಕುಂದ್ರಮ್ ಬೆಟ್ಟದ ಕಾರ್ತಿಕ ದೀಪೋತ್ಸವ ಸಮಾರಂಭಕ್ಕೆ ಅನುಮತಿ ನೀಡಿದ ಕುರಿತಂತೆ ಲೋಕಸಭೆಯಲ್ಲಿಂದು ಡಿಎಂಕೆ ಸದಸ್ಯರು ಪ್ರತಿಭಟನೆ ನಡೆಸಿದರು. ಬೆಳಿಗ್ಗೆ ೧೧ ಗಂಟೆಗೆ ಲೋಕಸಭೆ ಸಭೆ ಸೇರಿದಾಗ, ವಿರೋಧ ಪಕ್ಷವು ಸದನದ ಬಾವಿಗಿಳಿದು ಈ ವಿಷಯದ ಬಗ್ಗೆ ಪ್ರತಿಭಟಿಸಿತು. ಲೋಕಸಭಾಧ್ಯಕ್ಷ ಓಂ ಬಿರ್ಲಾ ಈ ವಿಷಯವು ವಿಚಾರಣೆಗೆ ಒಳಪಟ್ಟಿದ್ದು, ಸರ್ಕಾರಕ್ಕೂ ಇದಕ್ಕೂ ಯಾವುದೇ ಸಂಬಂಧವಿಲ್ಲ ಎಂದು ಹೇಳಿದರು. ಸದಸ್ಯರು ತಮ್ಮ ಸ್ಥಾನಕ್ಕೆ ಹಿಂತಿರುಗಿ ಸದನದ ಕಾರ್ಯಕ್ಕೆ ಅವಕಾಶ ನೀಡುವಂತೆ ಅವರು ಒತ್ತಾಯಿಸಿದರು. ಮನವಿಯ ಹೊರತಾಗಿಯೂ, ವಿರೋಧ ಪಕ್ಷದ ಸದಸ್ಯರು ತಮ್ಮ ಪ್ರತಿಭಟನೆಯನ್ನು ಮುಂದುವರೆಸಿದ ಹಿನ್ನೆಲೆ ಸದನವನ್ನು ೧೨ ಗಂಟೆಗೆ ಮುಂದೂಡಲಾಯಿತು. ರಾಜ್ಯಸಭೆಯಲ್ಲಿಯೂ ಡಿಎಂಕೆ ಮತ್ತು ಇತರ ವಿರೋಧ ಪಕ್ಷದ ಸದಸ್ಯರು ಈ ವಿಷಯದ ಬಗ್ಗೆ ಅಸಮಾಧಾನ ವ್ಯಕ್ತಪಡಿಸಿ ಸಭಾತ್ಯಾಗ ಮಾಡಿದರು.

*******

ಆರೋಗ್ಯ ಮೂಲಸೌಕರ್ಯಕ್ಕಾಗಿ ಕೇಂದ್ರ ಸರ್ಕಾರ ನೀಡುವ ಹಣವನ್ನು ರಾಜ್ಯ ಸರ್ಕಾರಗಳು ಸಮರ್ಪಕವಾಗಿ ಬಳಸುತ್ತಿಲ್ಲ ಎಂದು ಕೇಂದ್ರ ಆರೋಗ್ಯ ಸಚಿವ ಜೆ.ಪಿ. ನಡ್ಡಾ ಇಂದು ಆರೋಪಿಸಿದ್ದಾರೆ. ಲೋಕಸಭೆಯ ಪ್ರಶ್ನೋತ್ತರ ಅವಧಿಯಲ್ಲಿ ಪೂರಕ ಪ್ರಶ್ನೆಗಳಿಗೆ ಉತ್ತರಿಸಿದ ಸಚಿವರು, ಕೇಂದ್ರ ಸರ್ಕಾರವು ಆರೋಗ್ಯ ಮೂಲಸೌಕರ್ಯಕ್ಕಾಗಿ ವಿವಿಧ ರಾಜ್ಯ ಸರ್ಕಾರಗಳಿಗೆ

೬೪ ಸಾವಿರ ಕೋಟಿ ರೂಪಾಯಿಗಳನ್ನು ನೀಡಿದ್ದರೂ, ಅವು ಕೇವಲ ೩೦ ಸಾವಿರ ಕೋಟಿ ರೂಪಾಯಿಗಳನ್ನು ಮಾತ್ರ ಖರ್ಚು ಮಾಡಿವೆ ಎಂದು ಹೇಳಿದರು.

*******

ಕೆನಡಾದಲ್ಲಿರುವ ಭಾರತೀಯ ಹೈಕಮಿಷನರ್ ದಿನೇಶ್ ಕೆ ಪಟ್ನಾಯಕ್ ಅವರು ಕೆನಡಾದ ಸಾರ್ವಜನಿಕ ಸುರಕ್ಷತಾ ಸಚಿವರಾದ ಗ್ಯಾರಿ ಆನಂದಸಂಗರಿ ಅವರೊಂದಿಗೆ ಉಭಯ ದೇಶಗಳ ನಡುವಿನ ಭದ್ರತೆ ಮತ್ತು ಕಾನೂನು ಜಾರಿ ಸಹಕಾರವನ್ನು ಬಲಪಡಿಸುವ ಕುರಿತು ಚರ್ಚೆ ನಡೆಸಿದರು. ಸಂಬಂಧಗಳು ಸುಧಾರಿಸುತ್ತಿರುವ ನಡುವೆ, ಭಾರತ ಮತ್ತು ಕೆನಡಾ ನಡುವಿನ ದ್ವಿಪಕ್ಷೀಯ ಸಹಕಾರವನ್ನು ಗಾಢವಾಗಿಸುವಲ್ಲಿ ಈ ಸಭೆ ಮತ್ತೊಂದು ಹೆಜ್ಜೆಯಾಗಿದೆ. ಗಣಿಗಾರಿಕೆ, ನಿರ್ಣಾಯಕ ಖನಿಜಗಳು ಮತ್ತು ಇಂಧನ ವಲಯದಲ್ಲಿ ಹೂಡಿಕೆಗಳನ್ನು ಹೆಚ್ಚಿಸುವುದರ ಜೊತೆಗೆ ಭಾರತ ಮತ್ತು ಕೆನಡಾ ನಡುವಿನ ಕ್ವಾಂಟಮ್ ತಂತ್ರಜ್ಞಾನಗಳು, ಜೀವ ವಿಜ್ಞಾನ ಮತ್ತು ಚಿನ್ನದ ರಫ್ತುಗಳಲ್ಲಿ ಸಹಕಾರವನ್ನು ಮುಂದುವರಿಸುವ ಬಗ್ಗೆ ಮಾತುಕತೆಗಳು ಕೇಂದ್ರೀಕೃತವಾಗಿವೆ ಎಂದು ಒಟ್ಟಾವಾದಲ್ಲಿರುವ ಭಾರತೀಯ ಹೈಕಮಿಷನ್ ತಿಳಿಸಿದೆ. ದ್ವಿಪಕ್ಷೀಯ ಪಾಲುದಾರಿಕೆಯನ್ನು ಹೆಚ್ಚಿಸುವ ಒಂದು ಹೆಜ್ಜೆಯಾಗಿ ಪಟ್ನಾಯಕ್ ಬ್ರಿಟಿಷ್ ಕೊಲಂಬಿಯಾದ ಕೆನಡಾ ಪ್ರಾಂತ್ಯದ ಶಾಸಕಾಂಗ ಸಭೆಗೆ ಭೇಟಿ ನೀಡಿದರು.

*******

ದೆಹಲಿ ವಿಮಾನ ನಿಲ್ದಾಣದಿಂದ ಹೊರಡುವ ಇಂಡಿಗೋ ದೇಶೀಯ ವಿಮಾನಗಳನ್ನು ಇಂದು ಮಧ್ಯರಾತ್ರಿಯವರೆಗೆ ರದ್ದುಗೊಳಿಸಲಾಗಿದೆ. ಇತರ ಎಲ್ಲಾ ವಿಮಾನಯಾನ ಸಂಸ್ಥೆಗಳ ಕಾರ್ಯಾಚರಣೆಗಳು ನಿಗದಿತ ವೇಳಾಪಟ್ಟಿಯಂತೆ ಮುಂದುವರಿಯಲಿವೆ ಎಂದು ದೆಹಲಿ ವಿಮಾನ ನಿಲ್ದಾಣವು ತಿಳಿಸಿದೆ. ಅಡಚಣೆಯನ್ನು ತಗ್ಗಿಸಲು ಮತ್ತು ಪ್ರಯಾಣಿಕರಿಗೆ ಆರಾಮದಾಯಕ ಅನುಭವವನ್ನು ಖಚಿತಪಡಿಸಿಕೊಳ್ಳಲು ಆನ್-ಗ್ರೌಂಡ್ ತಂಡಗಳು ಕಾರ್ಯನಿರ್ವಹಿಸುತ್ತಿವೆ ಎಂದು ತಿಳಿಸಲಾಗಿದೆ. ಇತ್ತೀಚಿನ ವಿಮಾನ ಸ್ಥಿತಿಗಾಗಿ ಅಧಿಕೃತ ವೆಬ್‌ಸೈಟ್ ತಿತಿತಿ.ಟeತಿಜeಟhiಚಿiಡಿಠಿoಡಿಣ.iಟಿ ಅನ್ನು ಪರಿಶೀಲಿಸಲು ವಿಮಾನ ನಿಲ್ದಾಣದ ಅಧಿಕಾರಿಗಳು ಜನರಿಗೆ ಸೂಚಿಸಿದ್ದಾರೆ.

*******

ಉತ್ತರಾಖಂಡದ ಚಂಪಾವತ್ ಜಿಲ್ಲೆಯ ಬಾಗ್ ಧಾರ್ ಬಳಿ ನಿನ್ನೆ ತಡರಾತ್ರಿ ವಾಹನವೊಂದು ಆಳವಾದ ಕಂದಕಕ್ಕೆ ಉರುಳಿ ಬಿದ್ದ ಪರಿಣಾಮ ಐವರು ಪ್ರಯಾಣಿಕರು ಮೃತಪಟ್ಟಿದ್ದು, ಇತರ ಐದು ಮಂದಿ ಗಾಯಗೊಂಡಿದ್ದಾರೆ. ಗಾಯಾಳುಗಳನ್ನು ಲೋಹಘಾಟ್‌ನ ಉಪ-ಜಿಲ್ಲಾ ಆಸ್ಪತ್ರೆಗೆ ದಾಖಲಿಸಲಾಗಿದೆ. ಮದುವೆ ಸಮಾರಂಭದಿಂದ ಪ್ರಯಾಣಿಕರು ಹಿಂತಿರುಗುತ್ತಿದ್ದಾಗ ಈ ಅಪಘಾತ ಸಂಭವಿಸಿದೆ. ಮೃತದೇಹಗಳನ್ನು ಹೊರತೆಗೆದು ಗಾಯಾಳುಗಳನ್ನು ಸುರಕ್ಷಿತವಾಗಿ ತರಲು ಪೊಲೀಸರು, ಎಸ್‌ಡಿಆರ್‌ಎಫ್ ಮತ್ತು ಸ್ಥಳೀಯ ನಿವಾಸಿಗಳು ರಕ್ಷಣಾ ಕಾರ್ಯಾಚರಣೆ ನಡೆಸಿದರು.

*******

ಭಾರತ-ಓಮನ್ ಕಾರ್ಯತಂತ್ರದ ಸಮಾಲೋಚನಾ ಗುಂಪಿನ ೧೪ ನೇ ಸುತ್ತಿನ ಸಭೆ ಓಮನ್‌ನ ಮಸ್ಕಟ್‌ನಲ್ಲಿ ನಿನ್ನೆ ನಡೆಯಿತು. ರಾಜಕೀಯ, ರಕ್ಷಣೆ, ಭದ್ರತೆ, ವ್ಯಾಪಾರ, ಹೂಡಿಕೆ, ಇಂಧನ, ಕೃಷಿ, ಶಿಕ್ಷಣ, ಸಂಸ್ಕೃತಿ ಸೇರಿದಂತೆ ವಿವಿಧ ಕ್ಷೇತ್ರಗಳಲ್ಲಿ ಉಭಯ ದೇಶಗಳ ನಡುವಿನ ಬಹುಮುಖಿ ಕಾರ್ಯತಂತ್ರದ ಪಾಲುದಾರಿಕೆಯನ್ನು ಸಭೆ ಪರಿಶೀಲಿಸಿತು. ಪರಸ್ಪರ ಹಿತಾಸಕ್ತಿಯ ಪ್ರಾದೇಶಿಕ ಮತ್ತು ಜಾಗತಿಕ ವಿಷಯಗಳ ಬಗ್ಗೆಯೂ ಎರಡೂ ಕಡೆಯವರು ಚರ್ಚಿಸಿದರು.

*******

ಪ್ರವಾಸೋದ್ಯಮ ಸಚಿವಾಲಯವು ನಾಳೆ ವಿಜಯವಾಡದಲ್ಲಿ ಕರ್ನಾಟಕ ಸಂಗೀತ ಉತ್ಸವದ ಮೂರನೇ ಆವೃತ್ತಿ - 'ಕೃಷ್ಣವೇಣಿ ಸಂಗೀತ ನೀರಾಜನಂ' ೨೦೨೫ ಅನ್ನು ಆಯೋಜಿಸುತ್ತಿದೆ. ಎರಡು ದಿನಗಳ ಉತ್ಸವದಲ್ಲಿ ೯೮ ಕಲಾವಿದರನ್ನು ಒಳಗೊಂಡ ಒಟ್ಟು ೧೮ ಸಂಗೀತ ಕಚೇರಿಗಳನ್ನು ನಿಗದಿಪಡಿಸಲಾಗಿದೆ. ಉತ್ಸವದಲ್ಲಿ ಜಿಐ-ಟ್ಯಾಗ್ ಮಾಡಲಾದ ಮತ್ತು ಆಂಧ್ರಪ್ರದೇಶದ ಸಾಂಪ್ರದಾಯಿಕ ಕರಕುಶಲ ವಸ್ತುಗಳು ಮತ್ತು ಜವಳಿಗಳ ಪ್ರದರ್ಶನವನ್ನು ಸಹ ಪ್ರದರ್ಶಿಸಲಾಗುವುದು ಎಂದು ಸಚಿವಾಲಯ ತಿಳಿಸಿದೆ.

*******

ಚೆನ್ನೈನ ಎಗ್ಮೋರ್‌ನಲ್ಲಿ ನಡೆಯಲಿರುವ ೨೦೨೫ ರ ಎಫ್‌ಐಎಚ್ ಪುರುಷರ ಜೂನಿಯರ್ ಹಾಕಿ ವಿಶ್ವಕಪ್‌ನ ಕ್ವಾರ್ಟರ್ ಫೈನಲ್‌ನಲ್ಲಿ ಇಂದು ಭಾರತ ಸಾಂಪ್ರದಾಯಿಕ ಎದುರಾಳಿ ಬೆಲ್ಜಿಯಂ ಅನ್ನು ಎದುರಿಸಲಿದೆ.  ಪಂದ್ಯ ರಾತ್ರಿ ೮ ಗಂಟೆಗೆ ಆರಂಭವಾಗಲಿದೆ. ಗುಂಪು ಹಂತದಲ್ಲಿ ಭಾರತ ಚಿಲಿಯನ್ನು ೭-೦, ಓಮಾನ್ ಅನ್ನು ೧೭-೦ ಮತ್ತು ಸ್ವಿಟ್ಜರ್ಲ್ಯಾಂಡ್ ಅನ್ನು ೫-೦ ಅಂತರದಿಂದ ಸೋಲಿಸಿದೆ.

****END***